ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1171 (1220)
ಸದಸ್ಯರ ಹೆಸರು	:	ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	:	16-03-2021
ಉತ್ತರಿಸುವ ಸಚಿವರು	:	ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
1)	ನಂಜನಗೂಡು ನಗರದಲ್ಲಿ ಹುಲ್ಲಹಳ್ಳಿ ನಾಲೆಗೆ ಹೊಂದಿಕೊಂಡಿರುವ ಸುಭಾಷ್ ಚಂದ್ರ ಬೋಸ್ ಉದ್ಯಾನವನ ಹಾಳು ಬಿದ್ದಿದ್ದು, ಇದನ್ನು ಅಭಿವೃದ್ಧಿ ಪಡಿಸಲು ಕ್ರಮತೆಗೆದುಕೊಳ್ಳಲಾಗುವುದೇ:	ನಂಜನಗೂಡು ನಗರಸಭೆ ವ್ಯಾಪ್ತಿಯಲ್ಲಿರುವ ಸುಭಾಷ್ ಚಂದ್ರ ಬೋಸ್ ಉದ್ಯಾನವನವನ್ನು ಅಭಿವೃದ್ಧಿ ಪಡಿಸಲು ಈಗಾಗಲೇ 15ನೇ ಹಣಕಾಸು ಆಯೋಗದ 2020-21ನೇ ಸಾಲಿನ ಸಾಮಾನ್ಯ ಮೂಲ ಅನುದಾನದಲ್ಲಿ ರೂ.54.34ಲಕ್ಷಗಳಿಗೆ ವಿವಿಧ ಕಾಮಗಾರಿಗಳಾದ, ಅಲಂಕಾರಿಕ ದೀಪಗಳು, ನೀರು ಸರಬರಾಜು ಮತ್ತು ಶೌಚಾಲಯ ನಿರ್ಮಾಣ ಹಾಗು ಇತರೆ ಅಭಿವೃದ್ಧಿ ಕಾಮಗಾರಿಗಳಿಗೆ ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದ್ದು, ಕಾಮಗಾರಿಯನ್ನು ಪೂರ್ಣಗೊಳಿಸಲು ಗುತ್ತಿಗೆದಾರರಿಗೆ ಅಂಗೀಕಾರ ಪತ್ರವನ್ನು (LOA) ನೀಡಲಾಗಿರುತ್ತದೆ.
2)	ಸಾರ್ವಜನಿಕರಿಗೆ ಹಾಗೂ ಹಿರಿಯ ನಾಗರೀಕರಿಗೆ ಬಹಳ ಉಪಯುಕ್ತವಾಗಿದ್ದ ಈ ಉದ್ಯಾನವನ ಅಭಿವೃದ್ಧಿ ಪಡಿಸಿ, ಯಾವ ಕಾಲಮಿತಿಯೊಳಗೆ ಅನುಕೂಲ ಮಾಡಿಕೊಡಲಾಗುವುದು?	ನಿಗಧಿತ ಕಾಲಮಿತಿಯೊಳಗಾಗಿ ತುರ್ತಾಗಿ ಪೂರ್ಣಗೊಳಿಸಿ ಸಾರ್ವಜನಿಕರಿಗೆ ಹಾಗೂ ಹಿರಿಯ ನಾಗರೀಕರಿಗೆ ಉಪಯುಕ್ತವಾಗುವಂತೆ ಅನುಕೂಲ ಮಾಡಿಕೊಡಲಾಗುವುದು.

ಕಡತ ಸಂಖ್ಯೆ:ನಅಇ 156 ಎಸ್.ಎಫ್.ಸಿ 2021

(ಎನ್. ನಾಗರಾಜ್, ಎಂ.ಟಿ.ಬಿ.)
ಪೌರಾಡಳಿತ ಹಾಗೂ ಸಕ್ಕರೆ ಸಚಿವರು